ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 01 V2 ಸಿಡಿಸಿ (2) 2018-19/4040

ನಿರ್ದೇಶಕರ ಕಛೇರಿ
ಅರಮನೆ ರಸ್ತೆ
ಬೆಂಗಳೂರು 560 001
ದಿ: 22-11-2018

**-:ಸುತ್ತೋಲೆ:-**

ವಿಷಯ: ಜೆ ಎಸ್ ಎಸ್ ಮಹಿಳಾ ಪಾಲಿಟೆಕ್ನಿಕ್, ಮೈಸೂರು ಇಲ್ಲಿ ಎನ್‌ಐಟಿಟಿಟಿಆರ್ ಕೋಲ್ಕತ್ತಾ ಇವರ ಪ್ರಾಯೋಜಿತದಡಿ ಹಮ್ಮಿಕೊಂಡಿರುವ ಅಲ್ಪಾವಧಿ ತರಬೇತಿ ಕಾರ್ಯಕ್ರಮಕ್ಕೆ ಅನುಮತಿ ನೀಡುವ ಬಗ್ಗೆ.

ಉಲ್ಲೇಖ: ಪ್ರಾಚಾರ್ಯರು, ಜೆ ಎಸ್ ಎಸ್ ಮಹಿಳಾ ಪಲಿಟೆಕ್ನಿಕ್, ಮೈಸೂರು ಇವರ ಪತ್ರ ಸಂ: ಜೆಎಸ್‌ಎಸ್‌ಮಪಾ/1077/2018-19, ದಿನಾಂಕ:31-10-2018.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದನ್ವಯ ಎನ್‌ಐಟಿಟಿಟಿಆರ್ ಕೋಲ್ಕತ್ತಾ ಇವರ ಪ್ರಾಯೋಜಿತದಡಿ ದಿನಾಂಕ:07-01-2019 ರಿಂದ ದಿನಾಂಕ:12-01-2019ರವರೆಗೆ "Network Infrastructure and Management " ಎಂಬ ವಿಷಯದಲ್ಲಿ ರಾಜ್ಯದ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ CSE, IS, E&C, EI&CE & TC ವಿಭಾಗಗಳ ಬೋಧಕ ಸಿಬ್ಬಂದಿಗಳಿಗೆ ಅಲ್ಪಾವಧಿ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಉದ್ದೇಶಿಸಿದ್ದು, ಸದರಿ ಅಲ್ಪಾವಧಿ ತರಬೇತಿ ಕಾರ್ಯಕ್ರಮವನ್ನು ಸಂಸ್ಥೆಯಲ್ಲಿ ಆಯೋಜಿಸಲು ಅನುಮತಿ ನೀಡಲಾಗಿದೆ.

ಸದರಿ ಅಲ್ಪಾವಧಿ ತರಬೇತಿಗೆ ಹಾಜರಾಗಲು ಇಚ್ಛಿಸುವ ಬೋಧಕ ಸಿಬ್ಬಂದಿ ವರ್ಗದವರು. www.jsspwmys.orgನಲ್ಲಿ ಅರ್ಜಿಯನ್ನು ಡೌನ್ ಲೋಡ್ ಮಾಡಿ, ನೊಂದಾಯಿಸಿಕೊಳ್ಳಬಹುದಾಗಿದೆ. ಸದರಿ ತರಬೇತಿಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಯನ್ನು ಸಂಯೋಜನಾಧಿಕಾರಿಯಾದ ಕು॥ ಭಾನುಮತಿ ಡಿ., ಉಪನ್ಯಾಸಕರು, ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್ ವಿಭಾಗ, ಇವರನ್ನು ಮೊಬೈಲ್ ಸಂಖ್ಯೆ: 8880698811 ಈ-ಮೇಲ್ ಐಡಿ banumathi668@gmail.com ಮೂಲಕ ಸಂಪರ್ಕಿಸಲು ಸೂಚಿಸಲಾಗಿದೆ.

ತರಬೇತಿಯನ್ನು ಆಯೋಜಿಸಿರುವ ಸಂಸ್ಥೆಯ ಪ್ರಾಚಾರ್ಯರು, ತರಬೇತಿಗೆ ಆಯ್ಕೆಗೊಂಡ ಸರ್ಕಾರಿ/ಅನುದಾನಿತ ಸಂಸ್ಥೆಗಳ ಬೋಧಕ ಸಿಬ್ಬಂದಿ ವರ್ಗದವರ ಪಟ್ಟಿಗೆ ದಿನಾಂಕ:28-12-2018ರೊಳಗಾಗಿ ನಿರ್ದೇಶನಾಲಯದ ಅನುಮೋದನೆ ಪಡೆದು ತರಬೇತಿ ನಡೆಸಲು ಸೂಚಿಸಲಾಗಿದೆ. ಈ ಅಲ್ಪಾವಧಿ ತರಬೇತಿಗೆ ಇಲಾಖೆಯಿಂದ ಯಾವುದೇ ಪ್ರಯಾಣ ಭತ್ಯೆ ಹಾಗೂ ದಿನ ಭತ್ಯೆಗಳನ್ನು ನೀಡುವುದಿಲ್ಲ.

ಜಂಟಿ ನಿರ್ದೇಶಕರು(ಸಿಡಿಸಿ)

ಇವರಿಗೆ:- ಪ್ರಾಚಾರ್ಯರು, ಜೆ ಎಸ್ ಎಸ್ ಮಹಿಳಾ ಪಲಿಟೆಕ್ನಿಕ್, ಮೈಸೂರು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

ಪ್ರತಿ:-
1. ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ/ಇಂನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
2. ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, 2ನೇ ಮಹಡಿ, ಬೆಂಗಳೂರು ಇವರಿಗೆ ಡಿಟಿಇ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಮುಂದಿನ ಕ್ರಮಕ್ಕಾಗಿ.